## ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/02/ಇಎಸ್‌ಟಿ(9)/2018 /1962

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ: 10/10/2018.

### ಹಿಂಬರಹ

ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 626 ಸೇನೆನಿ 2018 ದಿನಾಂಕ:17.09.2018 ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ
3. ಈ ನಿರ್ದೇಶನಾಲಯದ ಇ.ಎಸ್.ಟಿ.(1) ರಿಂದ (10) ವಿಭಾಗಕ್ಕೆ ಮಾಹಿತಿಗಾಗಿ
4. ನಿರ್ದೇಶಕರ ಆಪ್ತ ಶಾಖೆಗೆ
5. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

8-9

11382

# ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 626 ಸೇನೆನಿ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 17.09.2018.

## ಸುತ್ತೋಲೆ

ವಿಷಯ: ರೋಸ್ಟರ್ ರಿಜಿಸ್ಟರ್ ಮತ್ತು ರಿಕ್ತ ಸ್ಥಾನಗಳ ರಿಜಿಸ್ಟರನ್ನು ನಿರ್ವಹಿಸುವ ಬಗ್ಗೆ.

ಉಲ್ಲೇಖ: 1. ಅಧಿಕೃತ ಜ್ಞಾಪನ ಸಂಖ್ಯೆ: ಡಿಪಿಎಆರ್ 42 ಎಸ್‌ಆರ್‌ಆರ್ 82, ದಿನಾಂಕ: 25.01.1984.
2. ಸುತ್ತೋಲೆ ಸಂಖ್ಯೆ: ಸಿಆಸುಇ 34 ಸೇನೆನಿ 2010, ದಿನಾಂಕ: 28.5.2010.
3. ಸುತ್ತೋಲೆ ಸಂಖ್ಯೆ: ಸಿಆಸುಇ 230 ಸೇನೆನಿ 2015, ದಿನಾಂಕ: 14.8.2015.
4. ಮಾನ್ಯ ಸಮಾಜ ಕಲ್ಯಾಣ ಸಚಿವರು ಸರ್ಕಾರದ ಮುಖ್ಯ ಕಾರ್ಯದರ್ಶಿಯವರಿಗೆ ಬರೆದಿರುವ ದಿನಾಂಕ: 4.9.2018ರ ಪತ್ರ.

To JD Adm/ADO
Sri: Gopal K
ADO/Reg(Adm)
5.30pm

ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡುವಾಗ ಜಾರಿಯಲ್ಲಿರುವ ನೇರ ನೇಮಕಾತಿ ಮೀಸಲಾತಿಯನ್ನು ಅನುಸರಿಸಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳಿಗೆ ಒದಗಿಸಿರುವ ಮೀಸಲಾತಿಯನ್ನು ಅನುಷ್ಠಾನಗೊಳಿಸಿರುವ ಬಗ್ಗೆ ನಮೂನೆ-1 ಮತ್ತು 2ರಲ್ಲಿ ನಿಗದಿಪಡಿಸಿರುವಂತೆ ರಿಕ್ತ ಸ್ಥಾನಗಳ ರಿಜಿಸ್ಟರನ್ನು ನಿರ್ವಹಿಸುವಂತೆ ಉಲ್ಲೇಖ 1ರಲ್ಲಿನ ದಿನಾಂಕ: 25.1.1984ರ ಅಧಿಕೃತ ಜ್ಞಾಪನ ಸಂಖ್ಯೆ: ಡಿಪಿಎಆರ್ 42 ಎಸ್‌ಆರ್‌ಆರ್ 82ರಲ್ಲಿ ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಗೆ ಸೂಚನೆಗಳನ್ನು ನೀಡಲಾಗಿತ್ತು.

2. ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯು ಅರ್ಜಿ ಸಂಖ್ಯೆ: 593/2008 ಮತ್ತು ಸಂಬಂಧಿಸಿದ ಅರ್ಜಿ ಸಂಖ್ಯೆ: 4953/2008ರಲ್ಲಿ ದಿನಾಂಕ: 19.10.2001ರಂದು ನೀಡಿರುವ ನಿರ್ದೇಶನದ ಹಿನ್ನೆಲೆಯಲ್ಲಿ ರಿಕ್ತ ಸ್ಥಾನಗಳ ರಿಜಿಸ್ಟರನ್ನು ನಿರ್ವಹಿಸುವ ಬಗ್ಗೆ ಕ್ರಮ ಕೈಗೊಳ್ಳುವಂತೆ ಉಲ್ಲೇಖ 2ರಲ್ಲಿನ ದಿನಾಂಕ: 28.5.2010ರ ಸುತ್ತೋಲೆ ಸಂಖ್ಯೆ: ಸಿಆಸುಇ 34 ಸೇನೆನಿ 2010ರಲ್ಲಿ, ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಗೆ ಸೂಚನೆಗಳನ್ನು ನೀಡಲಾಗಿರುತ್ತದೆ.

3. ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯು ರೋಸ್ಟರ್ ರಿಜಿಸ್ಟರನ್ನು ನಿರ್ವಹಿಸುವ ಬಗ್ಗೆ ನಮೂನೆಯನ್ನು ನಿಗದಿಪಡಿಸಿ ಅದನ್ನು ಕಟ್ಟುನಿಟ್ಟಾಗಿ ನಿರ್ವಹಿಸುವಂತೆ ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಗೆ ನಿರ್ದೇಶನ ನೀಡುವಂತೆ

..2..

Gayathri M.R
17.09.18

ಸೂಚಿಸಿದ್ದ ಹಿನ್ನೆಲೆಯಲ್ಲಿ, ಉಲ್ಲೇಖ 3ರಲ್ಲಿನ ಸುತ್ತೋಲೆ ಸಂಖ್ಯೆ: ಸಿಆಸುಇ 230 ಸೆನೆನಿ 2015, ದಿನಂಕ: 14.8.2015ರನ್ವಯ, ಸಂವಿಧಾನದ ಅನುಚ್ಛೇದ 371 ಜೆ ರನ್ವಯ ಸ್ಥಳೀಯ ವೃಂದ ಮತ್ತು ಉಳಿಕೆ ಮೂಲ ವೃಂದಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕವಾಗಿ ರಿಕ್ತ ಸ್ಥಾನಗಳ / ರೋಸ್ಟರ್ ರಿಜಿಸ್ಟರನ್ನು ಸುತ್ತೋಲೆಯೊಂದಿಗೆ ಲಗತ್ತಿಸಲಾದ ನಮೂನೆಯಲ್ಲಿ ಕಡ್ಡಾಯವಾಗಿ ನಿರ್ವಹಿಸುವಂತೆ ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಗೆ ಸೂಚನೆಗಳನ್ನು ನೀಡಲಾಗಿದೆ.

4. **ಮಾನ್ಯ ಸಮಾಜ ಕಲ್ಯಾಣ ಸಚಿವರು ಸರ್ಕಾರದ ಮುಖ್ಯ ಕಾರ್ಯದರ್ಶಿಯವರಿಗೆ ಬರೆದಿರುವ ದಿನಾಂಕ: 4.9.2018ರ ಪತ್ರದಲ್ಲಿ ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆ / ನಿಗಮ / ಮಂಡಳಿಗಳು / ವಿಶ್ವವಿದ್ಯಾಲಯಗಳು / ಕಂಪನಿ ನೋಂದಣಿ ಕಾಯ್ದೆಯಡಿಯಲ್ಲಿ ಸರ್ಕಾರಕ್ಕೆ ಒಳಪಡುವ ನೋಂದಾಯಿತ ಸಂಘ ಸಂಸ್ಥೆಗಳು / ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ನಿರ್ವಹಿಸಲಾಗಿರುವ ರೋಸ್ಟರ್ ರಿಜಿಸ್ಟರ್ ಮತ್ತು ವೇಕೆನ್ಸಿ ರಿಜಿಸ್ಟರ್‌ನ್ನು ಸಮಾಜ ಕಲ್ಯಾಣ ಇಲಾಖೆಗೆ 8 ದಿನಗಳೊಳಗಾಗಿ ಸಲ್ಲಿಸಲು ಕಟ್ಟುನಿಟ್ಟಿನ ನಿರ್ದೇಶನ ನೀಡುವಂತೆ ಕೋರಿರುತ್ತಾರೆ.**

5. ಸರ್ಕಾರವು ಈ ಬಗ್ಗೆ ಆಗಿಂದಾಗ್ಗೆ ಸೂಚನೆಗಳನ್ನು ನೀಡಿದ್ದರೂ ಸಹ ಬಹಳಷ್ಟು ನೇಮಕಾತಿ ಪ್ರಾಧಿಕಾರಗಳು ರೋಸ್ಟರ್ ರಿಜಿಸ್ಟರ್ ಮತ್ತು ವೇಕೆನ್ಸಿ ರಿಜಿಸ್ಟರ್‌ನ್ನು ಕ್ರಮಬದ್ಧವಾಗಿ ನಿರ್ವಹಿಸದೇ ಇರುವುದರಿಂದ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಧಿಕಾರಿ / ನೌಕರರಿಗೆ ನೇರ ನೇಮಕಾತಿ ಮತ್ತು ಮುಂಬಡ್ತಿಯಲ್ಲಿ ನಿಗದಿತ ಮೀಸಲಾತಿಯನ್ನು ಪಾಲಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

6. ಆದುದರಿಂದ, ಎಲ್ಲಾ ನೇಮಕಾತಿ ಪ್ರಾಧಿಕಾರಗಳು ರೋಸ್ಟರ್ ರಿಜಿಸ್ಟರ್ ಮತ್ತು ವೇಕೆನ್ಸಿ ರಿಜಿಸ್ಟರ್‌ನ್ನು ಸಿದ್ಧಪಡಿಸಿ **ತಪ್ಪದೇ ದಿನಾಂಕ: 25.09.2018ರೊಳಗಾಗಿ ಸಮಾಜ ಕಲ್ಯಾಣ ಇಲಾಖೆಗೆ ಸಲ್ಲಿಸುವಂತೆ ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಯವರು** ತಮ್ಮ ಆಡಳಿತ ವ್ಯಾಪ್ತಿಗೊಳಪಡುವ ವಿವಿಧ ಇಲಾಖೆ / ನಿಗಮ / ಮಂಡಳಿಗಳು / ಸ್ವಾಯತ್ತ ಸಂಸ್ಥೆಗಳು/ ಆಯೋಗ / ವಿಶ್ವವಿದ್ಯಾಲಯಗಳು / ಸಹಕಾರ ಸಂಸ್ಥೆಗಳು / ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ಕೂಡಲೇ ಸೂಚನೆ ನೀಡುವಂತೆ ಸೂಚಿಸಲಾಗಿದೆ.

Gayathri M.R
17.09.18

(ಗಾಯತ್ರಿ ಎಂ.ಆರ್.)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು-1).

ಇವರಿಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು - ಇದನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಸಿಆಸುಇ (ಸೇವಾ ನಿಯಮಗಳು-ಎ) ನಂ. 31, ವಿಧಾನ ಸೌಧ, ಬೆಂಗಳೂರು

..3..

ಇವರಿಗೆ ಒದಗಿಸಬೇಕೆಂದು ಕೋರಿದೆ.

ಪ್ರತಿ:

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳು
2. ಎಲ್ಲಾ ಇಲಾಖಾ ಮುಖ್ಯಸ್ಥರು.
3. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ: ವಿಧಾನ ಪರಿಷತ್ತು, ವಿಧಾನ ಸಭೆ, ಬೆಂಗಳೂರು
4. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಪಾರ್ಕ್ ಹೌಸ್, ಬೆಂಗಳೂರು.
5. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ರಾಜ್ಯ ಉಚ್ಛ ನ್ಯಾಯಾಲಯ, ಬೆಂಗಳೂರು.
6. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಬೆಂಗಳೂರು-38
7. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ ಬೆಂಗಳೂರು.
8. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ.
9. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಯವರು.
10. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

Gayathri M.R
17/09/18